ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	844
ಮಾನ್ಯ ಸದಸ್ಯರ ಹೆಸರು	ಶ್ರೀ. ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	20.09.2021
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ವಿಟಿಯು 2021-22ನೇ ಸಾಲಿನಲ್ಲಿ ಹಲವಾರು ಇಂಜಿನೀಯರಿಂಗ್ ಕಾಲೇಜುಗಳ ಮಾನ್ಯತೆಯನ್ನು ಮೂಲ ಸೌಕರ್ಯಗಳ ಕೊರತೆಯಿದೆ ಎಂಬ ಕಾರಣ ನೀಡಿ ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯಾವ ಯಾವ ಕಾಲೇಜುಗಳ ಮಾನ್ಯತೆ ರದ್ದಾಗಿದೆ;	-ಹೌದು- ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು 2021-22ನೇ ಶೈಕ್ಷಣಿಕ ಸಾಲಿನಲ್ಲಿ ಈ ಕೆಳಕಂಡ 6 ಇಂಜಿನೀಯರಿಂಗ್ ಕಾಲೇಜುಗಳ ಮಾನ್ಯತೆಯನ್ನು ರದ್ದುಪಡಿಸಿರುತ್ತದೆ. 1. ಆಲ್ಫಾ ಕಾಲೇಜ್ ಆಫ್ ಇಂಜಿನೀಯರಿಂಗ್, ಬೆಂಗಳೂರು. 2. ಶೇಕ್ ಕಾಲೇಜ್ ಆಫ್ ಇಂಜಿನೀಯರಿಂಗ್, ಬೆಳಗಾವಿ. 3. ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಬೆಂಗಳೂರು. 4. ಏಕಲವ್ಯ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಚಾಮರಾಜನಗರ. 5. ಶ್ರೀ ವಿನಾಯಕ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಕೆ.ಜಿ.ಎಫ್. 6. ಬಿಟಿಎಲ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು.
ಆ)	2021-22ರ ಸಾಲಿನಲ್ಲಿ ಮೂಲ ಸೌಕರ್ಯಗಳ ಕೊರತೆ ಎಂಬ ಕಾರಣ ನೀಡಿ ಇಂಜಿನೀಯರಿಂಗ್ ಕಾಲೇಜುಗಳ ಮಾನ್ಯತೆಯನ್ನು ರದ್ದು ಮಾಡಲಾದ ಸಂಸ್ಥೆಗಳಿಗೆ ಮಾನ್ಯತೆ ನೀಡಲು ಶಿಫಾರಸ್ಸು ಮಾಡಿದವರು ಯಾರು; ಶಿಫಾರಸ್ಸು ಮಾಡುವ ಸಮಯದಲ್ಲಿ ನ್ಯೂನತೆಗಳನ್ನು ಗಮನಿಸದಿರಲು ಕಾರಣವೇನು;	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಸಂಯೋಜನೆಗೊಂಡ ಎಲ್ಲಾ ತಾಂತ್ರಿಕ ಮಹಾವಿದ್ಯಾಲಯಗಳ ಮಾನ್ಯತೆಯನ್ನು ಮುಂದುವರೆಸಲು ಪ್ರತಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ರಚಿಸುವ ಬೇರೆ ಬೇರೆ ಸ್ಥಳೀಯ ಪರಿಶೀಲನಾ ಸಮಿತಿಯ ತಂಡಗಳು ಇಂಜನೀಯರಿಂಗ್ ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ನೀಡಿದಂತಹ ವರದಿ ಆಧಾರದ ಮೇಲೆ ಸಂಯೋಜನೆಯನ್ನು ಮುಂದುವರೆಸುವ ಅಥವಾ ರದ್ದುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ. ಅದರಂತೆ ಸ್ಥಳೀಯ ಪರಿಶೀಲನಾ ಸಮಿತಿಯು ನೀಡಿರುವ ವರದಿಯನ್ನಾಧರಿಸಿ 2021-22ನೇ ಶೈಕ್ಷಣಿಕ ಸಾಲಿನಿಂದ ಈ ಕೆಳಕಂಡ ಇಂಜಿನೀಯರಿಂಗ್ ಕಾಲೇಜುಗಳ ಮಾನ್ಯತೆಯನ್ನು ರದ್ದುಗೊಳಿಸಲಾಗಿರುತ್ತದೆ.

ಕ್ರಮ ಸಂಖ್ಯೆ	ಇಂಜನೀಯರಿಂಗ್ ಕಾಲೇಜಿನ ಹೆಸರು	ಪ್ರಾರಂಭವಾದ ವರ್ಷ	ಕಾರಣಗಳು
1.	ಆಲ್ಫಾ ಕಾಲೇಜ್ ಆಫ್ ಇಂಜಿನೀಯರಿಂಗ್, ಬೆಂಗಳೂರು	2001	ಸದರಿ ಕಾಲೇಜಿನವರು ವಿವಿಧ ಕಾರಣಗಳಿಂದ ಸ್ವಯಂ ಮುಚ್ಚಲು

2.	ಶೇಕ್ ಕಾಲೇಜ್ ಆಫ್ ಇಂಜಿನೀಯರಿಂಗ್, ಬೆಳಗಾವಿ	2009	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅರ್ಜಿಯನ್ನು ಸಲ್ಲಿಸಿದ್ದಾರೆ.
3.	ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಬೆಂಗಳೂರು	1979	ಸದರಿ ಸಂಸ್ಥೆಯವರು Fire Safety Certificate & Occupation Certificate ಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ತೆಗೆದು ಕೊಂಡಿರುವುದನ್ನು ಸ್ಥಳೀಯ ಪರಿಶೀಲನಾ ಸಮಿತಿಗೆ ಸಲ್ಲಿಸಿರುವುದಿಲ್ಲ ಹಾಗೂ ಭೂ ವಿವಾದಕ್ಕೆ ಸಂಬಂಧ ಪಟ್ಟಂತಹ ದಾಖಲೆಗಳನ್ನು ಒದಗಿಸಿರುವುದಿಲ್ಲ.
4.	ಏಕಲವ್ಯ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಚಾಮರಾಜನಗರ	2009	ಸದರಿ ಸಂಸ್ಥೆಯವರು 2021–22 ನೇ ಶೈಕ್ಷಣಿಕ ಸಾಲಿನಲ್ಲಿ ಸಂಯೋಜನೆ ಯನ್ನು ಮುಂದುವರೆಸಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅರ್ಜಿಯನ್ನು ಸಲ್ಲಿಸಿರುವುದಿಲ್ಲ.
5.	ಶ್ರೀ ವಿನಾಯಕ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಕೆ.ಜಿ.ಎಫ್	2015	
6.	ಬಿಟಿಎಲ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್ ಮೆಂಟ್, ಬೆಂಗಳೂರು	1997	

ಇ)	ಇಂಜಿನೀಯರಿಂಗ್ ಕಾಲೇಜುಗಳ ಪ್ರಾರಂಭಕ್ಕೆ ಶಿಫಾರಸ್ಸು ಮಾಡುವ ಸಮಿತಿ ಮತ್ತು ಅಧಿಕಾರಿಗಳು ವ್ಯೆಯಕ್ತಿಕ ಲಾಭವನ್ನು ಪಡೆದು ಭ್ರಷ್ಟಾಚಾರವೆಸಗಿ ಕಾಲೇಜುಗಳ ಮಾನ್ಯತೆಗಾಗಿ ಶಿಫಾರಸ್ಸು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಂಬಂಧಿತ ಸಮಿತಿಯಲ್ಲಿರುವ ಸದಸ್ಯರು ಹಾಗೂ	ಬಂದಿರುವುದಿಲ್ಲ

	ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸುವ ಕುರಿತು ಸರ್ಕಾರದ ನಿಲುವೇನು;	
ಈ)	ಸಮರ್ಪಕವಾದ ಮೂಲ ಸೌಕರ್ಯದ ಲಭ್ಯತೆಗಳು ಇರದಿದ್ದರೂ ಮಾನ್ಯತೆ ನೀಡುವ ಮೂಲಕ ರಾಜ್ಯದಲ್ಲಿನ ಇಂಜಿನೀಯರಿಂಗ್ ವಿದ್ಯಾಭ್ಯಾಸದ ಕ್ವಾಲಿಟಿ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ಸುಧಾರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಸಂಯೋಜನೆಗೊಂಡ ಎಲ್ಲಾ ತಾಂತ್ರಿಕ ಮಹಾವಿದ್ಯಾಲಯಗಳ ಇಂಜಿನೀಯರಿಂಗ್ ವಿದ್ಯಾಭ್ಯಾಸದ ಗುಣಮಟ್ಟವನ್ನು ಕಾಪಾಡಲು ಹಾಗೂ ಮಾನ್ಯತೆಯನ್ನು ಮುಂದುವರೆಸಲು ಪ್ರತಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಸ್ಥಳೀಯ ಪರಿಶೀಲನಾ ಸಮಿತಿಯನ್ನು ರಚಿಸಿ, ಪರಿಶೀಲನೆ ನಡೆಸಿ ಸಮಿತಿಯು ಕಾಲೇಜುಗಳಿಗೆ ನ್ಯೂನತೆಗಳನ್ನು ಸರಿಪಡಿಸಲು ಸೂಚಿಸಿ, ತೃಪ್ತಿಕರವಾದ ವರದಿಗಳನ್ನು ಬಂದ ತರುವಾಯ ಸ್ಥಳೀಯ ಪರಿಶೀಲನಾ ಸಮಿತಿಯು ನೀಡಿದಂತಹ ವರದಿ ಆಧಾರದ ಮೇಲೆ ಸಂಯೋಜನೆಯನ್ನು ಮುಂದುವರೆಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. 2020-21 ಹಾಗೂ 2021-22ನೇ ಶೈಕ್ಷಣಿಕ ಸಾಲುಗಳಲ್ಲಿ ಕೋವಿಡ್-19ರ ಕಾರಣದಿಂದ ಆನ್‌ಲೈನ್ ಮುಖಾಂತರ ಪರಿಶೀಲಿಸಲಾಗಿದೆ.
ಉ)	2021-22ರ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ಹೊಸ ಇಂಜಿನೀಯರಿಂಗ್ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ? (ಹೆಸರಿನೊಂದಿಗೆ ವಿವರ ನೀಡುವುದು)	ಒಂದು ಸರ್ಕಾರಿ ಇಂಜಿನೀಯರಿಂಗ್ ಕಾಲೇಜು, ಚಳ್ಳಕೆರೆ, ಚಿತ್ರದುರ್ಗ ಜಿಲ್ಲೆ.

ಇಡಿ 199 ಟಿಇಸಿ 2021

(ಡಾ॥ ಅಶ್ವತ್ಥ ನಾರಾಯಣ ಸಿ.ಎನ್.)

ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ
ಸಚಿವರು